ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/51/2015-16. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| ಮಾರಜ್ಜಿ ಗಂಡ ಲೇಟ್ ಮಾರಯ್ಯ<br>ಮಾಕನಡುಕು ಗ್ರಾಮ<br>ಕೂಡ್ಲಿಗಿ ತಾಲೂಕು | ಓಬಮ್ಮ ಗಂಡ ಲೇಟ್ ಓಬಯ್ಯ<br>ಮಾಕನಡುಕು ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಮಾಕನಡುಕು ಗ್ರಾಮದ ಸನಂ 243. ವಿಸ್ತೀರ್ಣ 7-45. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಮಾಕನಡುಕು ಗ್ರಾಮದ ಸನಂ 243. ವಿಸ್ತೀರ್ಣ 7-45. ಎಕ್ರೆ ಜಮೀನನ್ನು.ಸದರಿ ಗ್ರಾಮದ ಮಾರಜ್ಜಿ ಗಂಡ ಲೇಟ್ ಮಾರಯ್ಯ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಮಾಕನಡುಕು ಇವರು ನಮೂನೆ-21 ನೋಟಿಸನ್ನು ದಿನಾಂಕ 17-10-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಓಬಮ್ಮ ಗಂಡ ಲೇಟ್ ಓಬಯ್ಯ ಇವರು ನಮೂನೆ-21ಕ್ಕೆ ಸಹಿ ಮಾಡಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 15/2015-16. ದಿನಾಂಕ 18-11-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 16-03-2016 ರಿಂದ 21-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಮಾಕನಡುಕು ಗ್ರಾಮದ ಸನಂ 243. ವಿಸ್ತೀರ್ಣ 7-45. ಎಕ್ರೆ ಜಮೀನು ನನ್ನ ಗಂಡನ ಅಣ್ಣನಾದ ನಾಯ್ಕರ ಓಬಯ್ಯ ತಂದೆ ಕರಿಬಸಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 12-06-1965 ರಂದು ನಿಧನ ಹೊಂದಿದ್ದು ಇವರು ಅವಿವಾಹಿತರಾಗಿರುತ್ತಾರೆ. ನನ್ನ ಗಂಡನಾದ ಮಾರಯ್ಯ ತಂದೆ ಕರಿಬಸಪ್ಪ ಇವರು ದಿನಾಂಕ 26-07-1994 ರಂದು ಹಾಗೂ ನನ್ನ ಗಂಡನ ತಮ್ಮನವರಾದ ಓಬಯ್ಯ ತಂದೆ ಕರಿಬಸಪ್ಪ ಇವರು ದಿನಾಂಕ 07-03-2002 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಪ್ರಕಾರ ನಮ್ಮಗಳ ಹೆಸರಲ್ಲಿ ಜಂಟಿಯಾಗಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನಿನ ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಒಪ್ಪಿಗೆ ಇರುವುದಾಗಿ ತಿಳಿಸಿರುತ್ತಾರೆ.

34

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ತಕರಾರುದಾರರ ಹೇಳಿಕೆಗಳನ್ನು ಕೇಳಿ ಈ ಕೆಳಗಿನಂತೆ ಈ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಮಾಕನಡುಕು ಗ್ರಾಮದ ಸನಂ 243. ವಿಸ್ತೀರ್ಣ 7-45. ಎಕ್ರೆ ಜಮೀನನ್ನು ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಮಾರಜ್ಜಿ ಗಂಡ ಲೇಟ್ ಮಾರಯ್ಯ. ಓಬಮ್ಮ ಗಂಡ ಲೇಟ್ ಓಬಯ್ಯ. ಇವರುಗಳ ಹೆಸರಲ್ಲಿ ಜಂಟಿಯಾಗಿ ಹಕ್ಕು ಬದಲಾವಣೆ ಮಾಡಲು ಅದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಮಾರಜ್ಜಿ ಗಂಡ ಲೇಟ್ ಓಬಯ್ಯ. ಮಾಕನಡುಕು ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಓಬಮ್ಮ ಗಂಡ ಲೇಟ್ ಓಬಯ್ಯ ಮಾಕನಡುಕು ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.